# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 69
2. ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು)
3. ಉತ್ತರಿಸಬೇಕಾದ ದಿನಾಂಕ : 13.02.2024
4. ಉತ್ತರಿಸುವ ಸಚಿವರು : ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಲ್ಲಿ ಅಂತರರಾಷ್ಟ್ರೀಯ ಮಟ್ಟದ ದ್ರಾಕ್ಷಿಯನ್ನು ಬೆಳೆಯುತ್ತಿದ್ದು, ಅವರಿಗೆ ಸರಿಯಾದ ಮಾರುಕಟ್ಟೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | -ಹೌದು- |
| ಆ) | ಬಂದಿದ್ದಲ್ಲಿ, ಅವರಿಗಾಗಿ ಅಂತರರಾಷ್ಟ್ರೀಯ ಗುಣಮಟ್ಟದ ಮಾರುಕಟ್ಟೆ ಯನ್ನು ನಿರ್ಮಾಣ ಮಾಡಲು ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಅನುದಾನ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ? | ಒಣದ್ರಾಕ್ಷಿ ವಹಿವಾಟಿಗೆ ಪೂರಕವಾಗಿ ರಾಷ್ಟ್ರೀಯ ತೋಟಗಾರಿಕಾ ಯೋಜನೆಯಡಿ (NHM) ರೂ.4.50 ಕೋಟಿ ವೆಚ್ಚದಲ್ಲಿ ಆನ್‌ಲೈನ್ ಟ್ರೇಡಿಂಗ್ ಕಟ್ಟಡ ಹಾಗೂ 2 ಹರಾಜುಕಟ್ಟೆಗಳನ್ನು ನಿರ್ಮಿಸಲಾಗಿದೆ.<br><br>ಒಣದ್ರಾಕ್ಷಿ ಉತ್ಪನ್ನಕ್ಕೆ ಇ-ಟೆಂಡರ್ ವ್ಯವಸ್ಥೆ ಜಾರಿಗೊಳಿಸಿದೆ. ವಹಿವಾಟು ಸ್ಪರ್ಧಾತ್ಮಕವಾಗಿರಲು ಮಾರುಕಟ್ಟೆ ಶುಲ್ಕ ರೂ.0.10 ಪೈಸೆ ನಿಗದಿಪಡಿಸಿದೆ. ಉಪ ಮಾರುಕಟ್ಟೆ ಬಸವನಬಾಗೇವಾಡಿ ಪ್ರಾಂಗಣದಲ್ಲಿ ಹಾಗೂ ವಿಜಯಪುರ ಜಿಲ್ಲಾ ದ್ರಾಕ್ಷಿ ಬೆಳೆಗಾರರ ಸಂಘಕ್ಕೆ ಅಂದಾಜು ರೂ.750.00 ಲಕ್ಷ ವೆಚ್ಚದಲ್ಲಿ ಶೀತಲ ಗೃಹ ನಿರ್ಮಾಣ ಕಾಮಗಾರಿಗೆ ಸರ್ಕಾರವು ಮಂಜೂರಾತಿ ನೀಡಿದೆ. ಇದರಿಂದಾಗಿ ರೈತರು ಉತ್ತಮ ಧಾರಣೆ ಬರುವವರೆಗೆ ದಾಸ್ತಾನು ಮಾಡಿ ನಂತರದಲ್ಲಿ ಮಾರಾಟ ಮಾಡಲು ಅನುಕೂಲವಾಗುತ್ತದೆ. |

**ಸಂಖ್ಯೆ: ಸಿಒ 43 ಎಂಆರ್‌ಇ 2024**

**(ಶಿವಾನಂದ ಎಸ್. ಪಾಟೀಲ)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು.